ವಿಷಯ:- ಏಳನೆಯ ತರಗತಿಯವರಿಗೆ, ಪ್ರತಿ ತರಗತಿಗೆ ಶಿಕ್ಷಕರ ನೇಮಕಾತಿ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 252(535)

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) ಹಳ್ಳಿಗಳ ಶಾಲೆಗಳಲ್ಲಿ 7ನೇ ತರಗತಿವರೆಗೆ ಕೇವಲ3 ಜನ ಉಪಾಧ್ಯಾಯರಿರುವಂಥ ಶಾಲೆಗಳಿಗೆ ಉಪಾಧ್ಯಾಯರನ್ನು ಭರ್ತಿ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):- ಪ್ರತಿ ತರಗತಿಗೆ ಒಬ್ಬ ಶಿಕ್ಷಕ ಇರಲೇಬೇಕೆಂಬ ಸೂತ್ರವನ್ನು 2000ದ ಇಸವಿಯ ವೇಳೆಗೆ ಹಂತ ಹಂತವಾಗಿ ಗುರಿಮುಟ್ಟುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಡಿ ಇಂತಹ ಶಾಲೆಗಳಲ್ಲಿ ಆದ್ಯತೆ ಮೇರೆಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಔಷಧಿ ಸರಬರಾಜು ಮಾಡುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 253(534)

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ನಗರ ಹಾಗೂ ಗ್ರಾಮೀಣಾ ಪ್ರದೇಶಗಳಿಗೆ ಯಾವ ಯಾವ ಪ್ರಮಾಣದಲ್ಲಿ ಔಷಧಿ ಸರಬರಾಜು ಮಾಡಲಾಗುತ್ತಿದೆ?

ಡಾ: ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ರಾಜ್ಯದ ವಿವಿಧ ಆಸ್ಪತ್ರೆಗಳಿಗೆ ಈ ಕೆಳಕಂಡ ಮೌಲ್ಯದ ಔಷಧಿಗಳ ವಾರ್ಷಿಕ ಸರಬರಾಜು ಮಾಡಲಾಗುತ್ತಿದೆ.